**All India Radio: Bangalore**
**Regional Bulletin In Kannada**
**15.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**********

ಮುಖ್ಯಾಂಶಗಳು

೧. ನವೀಕರಿಸಬಹುದಾದ ಇಂಧನ ಗುರಿ ಸಾಧಿಸಲು ಸಾಮೂಹಿಕ ಕ್ರಮ ಅಗತ್ಯ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೨. ಅಂತಾರಾಷ್ಟ್ರೀಯ ಯೋಗ ದಿನದ ಪೂರ್ವಭಾವಿಯಾಗಿ ರಾಜ್ಯದ ವಿವಿಧೆಡೆ ಯೋಗ ತಾಲೀಮು

೩. ದಾವಣಗೆರೆಯಲ್ಲಿ ೧ ಸಾವಿರದ ೩೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ನಾಳೆ ಮುಖ್ಯಮಂತ್ರಿ ಚಾಲನೆ

೪. ಗುಡ್ಡ ಕುಸಿತ ಹಿನ್ನೆಲೆ ಶೃಂಗೇರಿ-ಮಂಗಳೂರು, ಕುಮಟಾ-ಶಿರಸಿ ಹೆದ್ದಾರಿಯಲ್ಲಿ ಸಂಚಾರ ಸ್ಥಗಿತ

><><><><><><><><><><><><

ಭವಿಷ್ಯದಲ್ಲಿ ಇಂಧನ ಕ್ಷೇತ್ರದಲ್ಲಿ ದೇಶದ ಬಲವನ್ನು ಹೆಚ್ಚಿಸುವ ಧ್ಯೇಯದೊಂದಿಗೆ ಕೇಂದ್ರ ಸರ್ಕಾರದ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯವು 'ಜಾಗತಿಕ ಪವನ ದಿನಾಚರಣೆ ೨೦೨೫' ಕಾರ್ಯಕ್ರಮವನ್ನು ಬೆಂಗಳೂರಿನಲ್ಲಿ ಇಂದು ಆಯೋಜಿಸಿತ್ತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ, ನವೀಕರಿಸಬಹುದಾದ ಇಂಧನದ ಗುರಿಗಳನ್ನು ಸಾಧಿಸಲು ಮತ್ತು ಪವನ ಶಕ್ತಿಯಲ್ಲಿ ಮುನ್ನಡೆಯಲು ಸಾಮೂಹಿಕ ಕ್ರಮ ಅಗತ್ಯ. ವಿಶ್ವಾಸಾರ್ಹ ಗ್ರಿಡ್‌ಗೆ ಸೌರ ಮತ್ತು ವಾಯು ಶಕ್ತಿಯನ್ನು ಸಂಯೋಜಿಸುವುದು ಅತ್ಯಗತ್ಯ ಎಂದು ಹೇಳಿದರು. ೨೦೩೦ ರ ವೇಳೆಗೆ ೫೦೦ ಗಿಗಾ ವ್ಯಾಟ್‌ಗೆ ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ಹೆಚ್ಚಿಸುವುದು ನಮ್ಮ ಗುರಿಯಾಗಿದೆ ಎಂದು ಅವರು ತಿಳಿಸಿದರು. ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ಯೇಸ್ಸೋ ನಾಯ್ಕ್ ಮಾತನಾಡಿ, ಕರ್ನಾಟಕ ದೇಶದಲ್ಲಿಯೇ ವೇಗವಾಗಿ ಬೆಳೆಯುತ್ತಿರುವ ರಾಜ್ಯ. ಪವನ ಶಕ್ತಿ ಉತ್ಪಾದನೆಯಲ್ಲಿ ಭಾರತ ನಾಲ್ಕು

ದಶಕಗಳಿಗೂ ಹೆಚ್ಚು ಅನುಭವ ಹೊಂದಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಾಜ್ಯ ಇಂಧನ ಸಚಿವ ಕೆ. ಜೆ. ಜಾರ್ಜ್, ಕೆಆರ್ಇಡಿಎಲ್ ಅಧ್ಯಕ್ಷ ಹಾಗೂ ಶಾಸಕ ಟಿ. ಡಿ.ರಾಜೇಗೌಡ ಸೇರಿ ಹಲವರು ಉಪಸ್ಥಿತರಿದ್ದರು.

**ಧ್ವನಿ: ಪ್ರಹ್ಲಾದ್ ಜೋಶಿ**

><><><><><><><><

ಪ್ರತಿ ವರ್ಷ ಜೂನ್ ೨೧ ರಂದು ನಡೆಯುವ ಅಂತಾರಾಷ್ಟ್ರೀಯ ಯೋಗ ದಿನದ ಪೂರ್ವಭಾವಿಯಾಗಿ ಬೆಂಗಳೂರಿನಲ್ಲಿಂದು ಯೋಗ ದಿನವನ್ನು ಬ್ರಹ್ಮಕುಮಾರಿಸ್ ಸಂಸ್ಥೆಯ ಸಹಯೋಗದೊಂದಿಗೆ ಕರ್ನಾಟಕದ ಕೇಂದ್ರ ಸಂವಹನ ವಿಭಾಗ ಆಯೋಜಿಸಿತ್ತು. ಕಾರ್ಯಕ್ರಮದಲ್ಲಿ ಬ್ರಹ್ಮಕುಮಾರಿ ಬಿ.ಕೆ.ಅಂಬಿಕಾ, ಕೇಂದ್ರ ಸಂವಹನ ವಿಭಾಗ-ಸಿಬಿಸಿ ಕರ್ನಾಟಕ ನಿರ್ದೇಶಕಿ ಪಲ್ಲವಿ ಚಿನ್ಯಾ ಮತ್ತು ಇತರೆ ಗಣ್ಯರು ಉಪಸ್ಥಿತರಿದ್ದರು. ಯೋಗ ಮತ್ತು ಧ್ಯಾನದ ಸಕಾರಾತ್ಮಕ ಪ್ರಯೋಜನಗಳು ಮತ್ತು ಅಂತಾರಾಷ್ಟ್ರೀಯ ಯೋಗ ದಿನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಈ ಪೂರ್ವಭಾವಿ ಕಾರ್ಯಕ್ರಮವನ್ನು ನಡೆಸಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಬ್ರಹ್ಮಕುಮಾರಿ ರಾಜಯೋಗಿನಿ ಬಿ.ಕೆ.ಅಂಬಿಕಾ, ಒತ್ತಡ ಮತ್ತು ಆತಂಕದಲ್ಲಿ ಮುಳುಗಿರುವ ಈ ಆಧುನಿಕ ಜೀವನ ಶೈಲಿಯಲ್ಲಿ ಯೋಗ ಮತ್ತು ಧ್ಯಾನದ ಅಗತ್ಯವನ್ನು ಒತ್ತಿ ಹೇಳಿದರು. ಹಿಂಸೆ ನೀಡುವ ಭಾವನೆಗಳು ಮತ್ತು ನಕಾರಾತ್ಮಕ ಆಲೋಚನೆಗಳು ರೋಗಗಳಿಗೆ ಕಾರಣವಾಗುತ್ತವೆ ಎಂದು ಅವರು ವಿವರಿಸಿದರು. ದೈಹಿಕ, ಮಾನಸಿಕ ಮತ್ತು ಸಾಮಾಜಿಕ ದುಃಖಗಳಿಂದ ಮುಕ್ತಿ ಪಡೆಯಲು, ಯೋಗ ಮತ್ತು ಧ್ಯಾನವನ್ನು ಅವಿರತವಾಗಿ ಅಭ್ಯಾಸ ಮಾಡುವಂತೆ ಅವರು ಕರೆ ನೀಡಿದರು. ಯೋಗ ಮತ್ತು ಧ್ಯಾನವನ್ನು ಅಭ್ಯಾಸ ಮಾಡುವವರು ನಕಾರಾತ್ಮಕ ಭಾವನೆಗಳು, ಆಲೋಚನೆಗಳು ಮತ್ತು ಪ್ರಭಾವಗಳನ್ನು ತಡೆಯಲು ಮಾನಸಿಕ ಮತ್ತು ದೈಹಿಕ ಶಕ್ತಿಯನ್ನು ಪಡೆಯುತ್ತಾರೆ ಎಂದು ತಿಳಿಸಿದರು.

><><><><><><><><

ಸಾಂಸ್ಕೃತಿಕ ನಗರಿ ಮೈಸೂರಿನ ಅರಮನೆ ಆವರಣದಲ್ಲಿ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ಇಂದು ಪೂರ್ವಭಾವಿ ತಾಲೀಮು ನಡೆಸಲಾಯಿತು. ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಕೇಂದ್ರ ಆಯುಷ್ ಇಲಾಖೆ ಹಾಗೂ ಮೈಸೂರು ಜಿಲ್ಲಾ ಪಂಚಾಯತ್ ಸಂಯುಕ್ತವಾಗಿ ಅರಮನೆ ಮುಂಭಾಗ ಏರ್ಪಡಿಸಿದ್ದ ಪೂರ್ವಭಾವಿ ಯೋಗ ಅಭ್ಯಾಸಕ್ಕೆ ನೂರಾರು ಯೋಗಪಟುಗಳು ವಿವಿಧ ಯೋಗಾಸನಗಳನ್ನು ಮಾಡುವ ಮುಖಾಂತರ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಈ ವೇಳೆ ಜಿಲ್ಲಾ ಆಯುಶ್ ಅಧಿಕಾರಿ ಡಾ.ರೇಣುಕಾ ದೇವಿ ಮಾತನಾಡಿ, ಮುಂದಿನ ದಿನಗಳಲ್ಲಿ ಮತ್ತಷ್ಟು ಪೂರ್ವಭಾವಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ದಿನದಂದು ಅರಮನೆ ಆವರಣದಲ್ಲಿ ಯೋಗ ದಿನಾಚರಣೆ ನಡೆಯಲಿದೆ ಎಂದು ತಿಳಿಸಿದ್ದಾರೆ. ಇದೇ

ವೇಳೆ, ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿಯಾಗಿ, ಇಂದು ಧಾರವಾಡ, ಎಪಿಎಂಸಿ ಆವರಣದ ಪತಂಜಲಿ ಯೋಗ ಕೇಂದ್ರದಲ್ಲಿ ಸಾರ್ವಜನಿಕರಿಗಾಗಿ, ವಿಶೇಷ ಯೋಗ ಧ್ಯಾನ ಹಾಗೂ ಪ್ರಾಣಾಯಾಮ ಶಿಬಿರ ಜರುಗಿತು.

><><><><><><><><

ದಾವಣಗೆರೆಯಲ್ಲಿ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ೧ ಸಾವಿರದ ೩೫೦ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಅಲ್ಲದೇ, ಸರ್ಕಾರದ ಸೌಲಭ್ಯ ಪಡೆದವರಿಗೆ ಸವಲತ್ತುಗಳನ್ನು ವಿತರಿಸಲಿದ್ದಾರೆ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

><><><><><><><><

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಳೆದ ಎರಡು ದಿನಗಳಿಂದ ಭಾರೀ ಮಳೆಯಾಗುತ್ತಿದೆ. ಸತತ ಮಳೆಯ ಪರಿಣಾಮ ನದಿಗಳು ತುಂಬಿ ಹರಿಯುತ್ತಿವೆ. ಜಿಲ್ಲೆಯಲ್ಲಿ ಇಂದು ಕೂಡ ಬೆಳಗ್ಗಿನಿಂದಲೇ ನಿರಂತರ ಮಳೆಯಾಗಿದ್ದು, ನಗರದ ಪಂಪ್ ವೆಲ್, ಕೊಟ್ಟಾರ, ಪಡೀಲ್ ಪ್ರದೇಶಗಳು ಜಲಾವೃತಗೊಂಡಿವೆ. ಭಾರಿ ಮಳೆ ಮುಂದುವರಿಯುವ ಸಾಧ್ಯತೆ ಇದ್ದು, ಎಲ್ಲಾ ತಹಶೀಲ್ದಾರರು ಅಪಾಯದಂಚಿನಲ್ಲಿರುವ ಮನೆಗಳ ಕುಟುಂಬಗಳನ್ನು ಸುರಕ್ಷಿತ ಸ್ಥಳಗಳಿಗೆ ಕೂಡಲೇ ಸ್ಥಳಾಂತರಿಸುವಂತೆ ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ಸೂಚಿಸಿದ್ದಾರೆ. ನೆರೆ ಉಂಟಾಗುವ ಪ್ರದೇಶಗಳ ಮೇಲೆ ತೀರಾ ನಿಗಾ ವಹಿಸಿ ಎಲ್ಲಾ ರಕ್ಷಣಾ ಸಾಮಾಗ್ರಿಗಳನ್ನು ಸನ್ನದ್ಧವಾಗಿರಿಸಬೇಕು. ಯಾವುದೇ ಸಾವು-ನೋವು ಸಂಭವಿಸದಂತೆ ಎಚ್ಚರಿಕೆ ವಹಿಸಬೇಕು. ಎಲ್ಲಾ ತಾಲೂಕು ಹಾಗೂ ಮಹಾನಗರಪಾಲಿಕೆ ಕಂಟ್ರೋಲ್ ರೂಂ ನಿರಂತರ ಕಾರ್ಯಾಚರಣೆಯಲ್ಲಿರಬೇಕು ಎಂದು ಸೂಚನೆ ನೀಡಿದ್ದಾರೆ.

><><><><><><><><

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಮಳೆಯಾಗುತ್ತಿದೆ. ಮಲೆನಾಡು ಭಾಗದಲ್ಲಿ ಗಾಳಿ ಸಹಿತ ಮಳೆಯಾಗುತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಹೆಚ್ಚಿನ ಮಳೆಯಿಂದ ಶೃಂಗೇರಿ ತಾಲೂಕಿನ ನೆಮ್ಮಾರು ಬಳಿ ರಾಷ್ಟ್ರೀಯ ಹೆದ್ದಾರಿ ೧೬೯ ರಲ್ಲಿ ಭೂಕುಸಿತ ಉಂಟಾಗಿದೆ. ಅಪಾರ ಪ್ರಮಾಣದ ಕಲ್ಲು ಮಣ್ಣು ರಸ್ತೆಗೆ ಬಿದ್ದಿದ್ದು, ಸದಕ್ಕೆ ಶೃಂಗೇರಿ - ಮಂಗಳೂರು ರಸ್ತೆ ಸಂಪರ್ಕ ಕಡಿತಗೊಂಡಿದ್ದು, ವಾಹನ ಸವಾರರು ಬದಲಿ ಮಾರ್ಗದಲ್ಲಿ ತೆರಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಸ್ಥಳಕ್ಕೆ ಪೊಲೀಸ್ ಹಾಗೂ ಎನ್.ಡಿ.ಆರ್.ಎಫ್ ತಂಡ ಭೇಟಿ ನೀಡಿದ್ದು, ರಸ್ತೆ ತೆರವು ಕಾರ್ಯ ಪ್ರಗತಿಯಲ್ಲಿದೆ. ಚಾರ್ಮಾಡಿ ಘಾಟ್, ಕೊಟ್ಟಿಗೆಹಾರ ಸುತ್ತ-ಮುತ್ತ ಭಾರಿ ಮಳೆಯಾಗುತ್ತಿದೆ.

ಚಾರ್ಮಾಡಿ ಘಾಟ್‌ನ ರಸ್ತೆ ಮೇಲೆ ಅಪಾರ ಪ್ರಮಾಣದ ನೀರು ಹರಿಯುತ್ತಿದೆ. ಈ ಭಾಗದಲ್ಲಿ ವಾಹನ ಸವಾರರು ಎಚ್ಚರಿಕೆಯಿಂದ ವಾಹನ ಚಲಾಯಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಮುಳ್ಳಯ್ಯನಗಿರಿ ರಸ್ತೆಯಲ್ಲಿ ಕೂಡ ಪದೇ ಪದೆ ಭೂ ಕುಸಿತ ಉಂಟಾಗುತ್ತಿದೆ.

><><><><><><><><

ಉತ್ತರಕನ್ನಡ ಜಿಲ್ಲೆಯ ಕುಮಟಾ ತಾಲೂಕಿನಾದ್ಯಂತ ನಿರಂತರವಾಗಿ ಮಳೆ ಸುರಿಯುತ್ತಿರುವ ಪರಿಣಾಮ ಕುಮಟಾ - ಶಿರಸಿ ಹೆದ್ದಾರಿಯ ದೇವಿ ಮನೆ ಘಟ್ಟದಲ್ಲಿ ನಿನ್ನೆ ತಡರಾತ್ರಿ ಭಾರಿ ಗುಡ್ಡ ಕುಸಿತ ಉಂಟಾಗಿದ್ದು, ಹೆದ್ದಾರಿಯಲ್ಲಿ ವಾಹನ ಸಂಚಾರ ಬಂದ್ ಮಾಡಲಾಗಿದೆ. ನಿನ್ನೆ ಮಧ್ಯರಾತ್ರಿ ಸುಮಾರು ೧.೩೦ರ ಹೊತ್ತಿಗೆ ಗುಡ್ಡ ಕುಸಿತವಾಗಿದೆ. ಮಣ್ಣಿನ ಜೊತೆ ಕಲ್ಲು ಬಂಡೆಕಲ್ಲುಗಳು ಹೆದ್ದಾರಿಯಲ್ಲಿ ಉರುಳಿ ಬಿದ್ದಿದೆ. ಗುರುವಾರ ಸಂಜೆ ಸಹ ಇದೇ ಭಾಗದಲ್ಲಿ ಗುಡ್ಡ ಕುಸಿತ ಉಂಟಾಗಿ ವಾಹನ ಸಂಚಾರ ಬಂದ್ ಮಾಡಲಾಗಿತ್ತು. ನಿನ್ನೆ ಮಧ್ಯಾಹ್ನದ ವೇಳೆಗೆ ಹೆದ್ದಾರಿಯಲ್ಲಿ ಬಿದ್ದಿದ್ದ ಮಣ್ಣನ್ನು ತೆರವು ಮಾಡಿ ವಾಹನ ಸಂಚಾರಕ್ಕೆ ಅವಕಾಶ ನೀಡಲಾಗಿತ್ತು. ರಾತ್ರಿ ಸುರಿದ ಮಳೆಯಿಂದಾಗಿ ಮತ್ತೆ ಅದೇ ಸ್ಥಳದಲ್ಲಿ ಗುಡ್ಡ ಕುಸಿತ ಉಂಟಾಗಿದೆ. ಮಣ್ಣಿನ ಜೊತೆಯಲ್ಲಿ ಕಲ್ಲುಬಂಡೆಗಳು ಉರುಳಿ ಬಿದ್ದಿರುವುದರಿಂದ ಕುಮಟಾ - ಶಿರಸಿ ಹೆದ್ದಾರಿಯಲ್ಲಿ ಸದ್ಯ ಸಂಚಾರ ಬಂದ್ ಮಾಡಲಾಗಿದೆ. ಸ್ಥಳದಲ್ಲಿ ಮಣ್ಣು ತೆರವು ಕಾರ್ಯ ನಡೆಸಲಾಗುತ್ತಿದೆ.

><><><><><><><><

ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ಪರಿಶಿಷ್ಟ ಪಂಗಡದ ಜನಾಂಗದವರು ಹೆಚ್ಚಾಗಿರುವ ಜಿಲ್ಲೆಗಳ ಆಯ್ದ ಗ್ರಾಮ ಪಂಚಾಯತಿಗಳಲ್ಲಿ ಧರ್ತಿ ಅಬಾ ಅಭಿಯಾನ- ಜಾಗೃತಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ, ಭಟ್ಕಳ, ಜೋಯಿಡಾದ ಮತ್ತು ಮುಂಡಗೋಡ ಸೇರಿದಂತೆ ಒಟ್ಟು ೧೧ ಗ್ರಾಮ ಪಂಚಾಯಿತಿಗಳಲ್ಲಿ ಇಂದಿನಿಂದ ಜೂನ್ ೩೦ರವರೆ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಜಿಲ್ಲೆಯ ಪರಿಶಿಷ್ಟ ಪಂಗಡದ ಜನಾಂಗದವರು ಈ ಶಿಬಿರದಲ್ಲಿ ಭಾಗವಹಿಸಿ, ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

><><><><><><><><

ಮಂಗಳೂರು ಎಕ್ಸ್‌ಪರ್ಟ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ವಿಜಯಪುರದ ನಿಖಿಲ್ ಸೊನ್ನದ ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ ನಡೆದ ಪ್ರಸಕ್ತ ಸಾಲಿನ ರಾಷ್ಟ್ರೀಯ ಪ್ರವೇಶ ಪರೀಕ್ಷೆ ನೀಟ್‌ನಲ್ಲಿ ರಾಷ್ಟ್ರಕ್ಕೆ ೧೭ನೇ ರ‍್ಯಾಂಕ್ ಹಾಗೂ ರಾಜ್ಯಕ್ಕೆ ಪ್ರಥಮ ರ‍್ಯಾಂಕ್ ಗಳಿಸಿದ್ದಾರೆ. ವಿಜಯಪುರದ ಸಂಜೀವಿನಿ ಆಸ್ಪತ್ರೆಯ ವೈದ್ಯ ದಂಪತಿಗಳಾದ ಡಾ. ಸಿದ್ದಪ್ಪ ಸೊನ್ನದ ಮತ್ತು ಡಾ. ಮೀನಾಕ್ಷಿ ಸೊನ್ನದ ಅವರ ಪುತ್ರ ನಿಖಿಲ್ ಸೊನ್ನದ ನೀಟ್ ಪರೀಕ್ಷೆಯಲ್ಲಿ ೭೨೦ ಅಂಕಗಳಿಗೆ ೬೭೦ ಅಂಕ ಗಳಿಸಿದ್ದಾರೆ. ದ್ವಿತೀಯ ಪಿಯುಸಿಯಲ್ಲಿ ಶೇಕಡ ೯೮.೩ ಅಂಕ ಗಳಿಸಿದ್ದರು. ಮುಂದೆ

ನರರೋಗ ಶಸ್ತ್ರಚಿಕಿತ್ಸಕ ಆಗಬೇಕು ಎಂಬ ಆಶಯ ಇದೆ ಎಂದು ನಿಖಿಲ್ ಸೊನ್ನದ ಅಕಾಶವಾಣಿಗೆ ತಿಳಿಸಿದ್ದಾರೆ.

**ಧ್ವನಿ: ನಿಖಿಲ್ ಸೊನ್ನದ**

><><><><><><><><